# ಕರ್ನಾಟಕ ವಿಧಾನ ಪರಿಷತ್ತು

ಸಂಖ್ಯೆ:ಕವಿಪ/ಆ-1/161/ಸು/2021

ವಿಧಾನ ಪರಿಷತಿನ ಸಚಿವಾಲಯ,
ಅಂಚೆ ಪೆಟ್ಟಿಗೆ ಸಂಖ್ಯೆ:5079, ವಿಧಾನ ಸೌಧ,
ಬೆಂಗಳೂರು-560 001, ದಿನಾಂಕ: 23.04.2021

## ಸುತ್ತೋಲೆ

ಉಲ್ಲೇಖ: 1. ಸರ್ಕಾರದ ಆದೇಶ ಸಂಖ್ಯೆ:ಆರ್ ಡಿ:158:ಟಿಎನ್ಆರ್:2020, ದಿನಾಂಕ:20.04.2021.

2.ಸರ್ಕಾರದ ಸುತ್ತೋಲೆ ಸಂಖ್ಯೆ: ಸಿಆಸುಇ/87/ಡಿಇವಿ/2021 ದಿನಾಂಕ: 20.04.2021

3.ಈ ಸಚಿವಾಲಯದ ಸುತ್ತೋಲೆ ಸಂಖ್ಯೆ: ಕವಿಪ/ಆ-1/161/ಸು/2021,

ದಿನಾಂಕ:20.04.2021.

***

ಕರ್ನಾಟಕ ರಾಜ್ಯದಲ್ಲಿ ಕೊರೋನಾ ವೈರಸ್ (ಕೋವಿಡ್-19) ಹರಡುತ್ತಿರುವ ಹಿನ್ನಲೆಯಲ್ಲಿ, ಸರ್ಕಾರದ ಸಚಿವಾಲಯ ಸೇರಿದಂತೆ ರಾಜ್ಯ ಮಟ್ಟದ ಎಲ್ಲಾ ಇಲಾಖಾ ಕಚೇರಿಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಎಲ್ಲಾ ವರ್ಗದ ಅಧಿಕಾರಿ/ಸಿಬ್ಬಂದಿಯವರು ಕರ್ತವ್ಯ ನಿರ್ವಹಿಸುವ ಬಗ್ಗೆ ಉಲ್ಲೇಖಿತ ಆದೇಶ ಮತ್ತು ಸುತ್ತೋಲೆಯಲ್ಲಿ ರಾಜ್ಯ ಸರ್ಕಾರದಿಂದ ಕೆಲವು ಮಾರ್ಗಸೂಚಿಗಳನ್ನು ಮತ್ತು ನಿರ್ದೇಶನವನ್ನು ನೀಡಲಾಗಿರುತ್ತದೆ. ಸದರಿ ಆದೇಶದಲ್ಲಿ ಅತ್ಯಗತ್ಯ ಸೇವೆಯನ್ನು ಒದಗಿಸುತ್ತಿರುವ ಇಲಾಖೆಗಳನ್ನು ಹೊರತುಪಡಿಸಿ, ರಾಜ್ಯ ಸರ್ಕಾರದ ಎಲ್ಲಾ ಕಚೇರಿಗಳು, ಅರೆ ಸರ್ಕಾರಿ, ಸ್ವಾಯತ್ತ ಸಂಸ್ಥೆ, ನಿಗಮ/ಮಂಡಳಿ/ಪ್ರಾಧಿಕಾರದ ಕಚೇರಿಗಳು ಶೇಕಡಾ 50 ರಷ್ಟು ಅಧಿಕಾರಿ/ಸಿಬ್ಬಂದಿಗಳೊಂದಿಗೆ ಕರ್ತವ್ಯ ನಿರ್ವಹಿಸತಕ್ಕದೆಂದು, ಉಳಿದ ಶೇಕಡಾ 50ರಷ್ಟು ಅಧಿಕಾರಿ/ಸಿಬ್ಬಂದಿಗಳನ್ನು ಕೋವಿಡ್-19ರ ನಿಯಂತ್ರಣ ಮತ್ತು ನಿರ್ವಹಣಾ ಕಾರ್ಯಕ್ಕಾಗಿ ನಿಯೋಜಿಸತಕ್ಕದೆಂದು ತಿಳಿಸಿರುವುದಲ್ಲದೆ, ದೃಷ್ಟಿಹೀನ ಹಾಗೂ ಇತರೆ ದೈಹಿಕ ಅಂಗವೈಕಲ್ಯ ಹೊಂದಿರುವ ಅಧಿಕಾರಿ/ಸಿಬ್ಬಂದಿ ಮತ್ತು ಗರ್ಭಿಣಿ ಮಹಿಳಾ ಸಿಬ್ಬಂದಿಗಳು ಕಚೇರಿಗೆ ಹಾಜರಾಗುವುದರಿಂದ ವಿನಾಯಿತಿ ನೀಡಲಾಗಿರುತ್ತದೆ. ಈ ಮಾರ್ಗಸೂಚಿಯು ದಿನಾಂಕ:04.05.2021ರವರೆಗೆ ಅಸ್ತಿತ್ವದಲ್ಲಿರುತ್ತದೆಂದು ತಿಳಿಸಲಾಗಿರುತ್ತದೆ.

ಈ ಹಿನ್ನಲೆಯಲ್ಲಿ, ಕರ್ನಾಟಕ ವಿಧಾನ ಪರಿಷತ್ತಿನ ಸಚಿವಾಲಯದ (ಶಾಸಕರ ಭವನವೂ ಸೇರಿದಂತೆ) ಎಲ್ಲಾ ಅಧಿಕಾರಿ/ನೌಕರರುಗಳು ಎಂದಿನಂತೆ ಕರ್ತವ್ಯಕ್ಕೆ ಹಾಜರಾಗಿ ಕೊರೋನಾ ವೈರಸ್ (ಕೋವಿಡ್-19ರ) ಸಾಂಕ್ರಾಮಿಕ ರೋಗವನ್ನು ನಿಯಂತ್ರಿಸಲು ಮತ್ತು ಸಂಪೂರ್ಣವಾಗಿ ನಿರ್ಮೂಲನಗೊಳಿಸುವ ಸಂಬಂಧ ಸರ್ಕಾರ ಹೊರಡಿಸಿರುವ ನಿಯಮಗಳನ್ನು ಪಾಲಿಸಬೇಕೆಂದು, ಜೊತೆಗೆ ಅಗತ್ಯ ಮುಂಜಾಗ್ರತಾ ಕ್ರಮ ಕೈಗೊಂಡು, ಬಾಕಿ ಉಳಿದಿರುವಂತಹ ಎಲ್ಲಾ ಕೆಲಸ ಕಾರ್ಯಗಳನ್ನು ನಿರ್ವಹಿಸತಕ್ಕದ್ದು.

ಮುಂದುವರೆದಂತೆ, ಈ ಸಚಿವಾಲಯದಲ್ಲಿ ಕಾರ್ಯನಿರ್ವಹಿಸುತ್ತಿರುವ ದೃಷ್ಟಿಹೀನ ಹಾಗೂ ಇತರ ದೈಹಿಕ ಅಂಗವೈಕಲ್ಯ ಹೊದಿರುವ ಅಧಿಕಾರಿ/ಸಿಬ್ಬಂದಿ ಮತ್ತು ಗರ್ಭಿಣಿ ಮಹಿಳಾ ಸಿಬ್ಬಂದಿಗಳು ದಿನಾಂಕ:04.05.2021ರವರೆಗೆ ಕಚೇರಿಗೆ ಹಾಜರಾಗುವುದರಿಂದ ವಿನಾಯಿತಿ ನೀಡಲಾಗಿದೆ ಎಂದು ತಿಳಿಸಲಾಗಿದೆ.

ಮಾನ್ಯ ಸಭಾಪತಿಯವರ ಆದೇಶಾನುಸಾರ

(ಕೆ.ಆರ್ . ಮಹಾಲಕ್ಷ್ಮಿ)
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತಿನ ಸಚಿವಾಲಯ

ಗೆ,

ವಿಧಾನ ಪರಿಷತ್ತಿನ ಎಲ್ಲಾ ಅಧಿಕಾರಿ/ ನೌಕರರುಗಳಿಗೆ (ಶಾಸಕರ ಭವನವೂ ಸೇರಿದಂತೆ)

ಪ್ರತಿಗಳು:

1. ಮಾನ್ಯ ಸಭಾಪತಿಯವರ ಆಪ್ತ ಕಾರ್ಯದರ್ಶಿಯವರಿಗೆ, ಕವಿಪ.
2. ಕಾರ್ಯದರ್ಶಿಯವರ ಪತ್ರಾಂಕಿತ ಆಪ್ತ ಸಹಾಯಕರಿಗೆ, ಕವಿಪ.,
3. ಅಪರ ಕಾರ್ಯದರ್ಶಿ/ ಜಂಟಿ ಕಾರ್ಯದರ್ಶಿಯವರ ಆಪ್ತ ಸಹಾಯಕರಿಗೆ, ಕವಿಪ.
4. ಸಂಬಂಧಪಟ್ಟ ಕಡತಕ್ಕೆ/ರಕ್ಷಾ ಕಡತಕ್ಕೆ/ಸೂಚನಾ ಫಲಕಕ್ಕೆ/ಬಿಡಿ ಪ್ರತಿಗಳು.